Karnatak Law Society's
Vishwanathrao Deshpande Institute of Technology
(Approved by AICTE, New Delhi. Affiliated to VTU, Belagavi)
(Recognised Under Section 2(f) by UGC, New Delhi)
Udyog Vidya Nagar, Haliyal – 581329, Dist: Uttar Kannada (Karnataka)
Phone: 08284-220861, 220334, 221409, Fax: 08284-220813
www.klsvdit.edu.in principal@klsvdit.edu.in

Date: 08-03-2022

**ಪತ್ರಿಕಾ ಪ್ರಕಟಣೆ:**

## ವಿಶ್ವ ಮಹಿಳಾ ದಿನದ ಪ್ರಯುಕ್ತ ಕಾನೂನು ಅರಿವು ಕಾರ್ಯಕ್ರಮ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ ಹಳಿಯಾಳದಲ್ಲಿ ಮಾರ್ಚ್ 8 ರಂದು ವಿಶ್ವ ಮಹಿಳಾ ದಿನದ ಪ್ರಯುಕ್ತ ಮಹಿಳಾ ಕಾನೂನು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹಳಿಯಾಳದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ. ನಾಗಮ್ಮ ಎಮ್ ಇಚ್ಚಂಗಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ಮಹಿಳೆ ಮತ್ತು ಪುರುಷ ಇಬ್ಬರೂ ಸಮಾಜದ ಅವಿಭಾಜ್ಯ ಅಂಗವಾಗಿದ್ದು ಪುರುಷರಂತೆ ಮಹಿಳೆಯರೂ ಸಹ ಎಲ್ಲ ಕ್ಷೇತ್ರಗಳಲ್ಲಿ ಸಾಧನೆಗೈಯಬೇಕೆಂದು ಕರೆ ನೀಡಿದರು. ಹಳಿಯಾಳದ ಮತ್ತೊಬ್ಬ ಸಿವಿಲ್ ನ್ಯಾಯಾಧೀಶರಾದ ಶ್ರೀ. ದೇಶಭೂಷಣ ಕೌಜಲಗಿ ಕಾರ್ಯಕ್ರಮದ ಗೌರವಾಧ್ಯಕ್ಷರಾಗಿ ಮಾತನಾಡುತ್ತ ಮಹಿಳೆಯರ ಹಕ್ಕುಗಳು ಮತ್ತು ಕಾನೂನುಗಳ ಕುರಿತು ಮಾಹಿತಿ ನೀಡಿದರು ಹಾಗೂ ಮಹಿಳಾ ಸಾಧಕರ ಸಾಧನೆಗಳನ್ನು ವಿವರಿಸಿದರು. ಹಳಿಯಾಳದ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಶ್ರೀ. ಎಂ ವಿ ಅಷ್ಟೇಕರ್ ಅವರು ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟಲು ಇರುವ ಪೋಕ್ಸೋ ಕಾಯಿದೆಯ ಕುರಿತು ಮಾಹಿತಿ ನೀಡಿದರು.

ಪ್ರಾಂಶುಪಾಲರಾದ ಡಾ.ವಿ ಎ ಕುಲಕರ್ಣಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಪ್ರೊ. ಪೂರ್ಣಿಮಾ ರಾಯ್ಕರ್ ಸ್ವಾಗತಿಸಿದರು. ಡಾ. ಮೀನಲ್ ಕೆ ವಂದಿಸಿದರು. ವಿದ್ಯಾರ್ಥಿನಿಯರಾದ ಸಂಜನಾ ಮತ್ತು ಅಂಕಿತಾ ನಿರೂಪಿಸಿದರು. ಮಹಾವಿದ್ಯಾಲಯದ ಮಹಿಳಾ ಸಿಬ್ಬಂದಿ ವರ್ಗದವರು ಮತ್ತು 150 ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


VISHWANATHRAO DESHPANDE
INSTITUTE OF TECHNOLOGY
KLS PU and BCA College
INTERNATIONAL WOMEN'S DAY - 2022
KLS
VDI


VISHWANATHRAO DESHPANDE
INSTITUTE OF TECHNOLOGY
KLS
VDI